# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 05.03.2022 ರಂದು ಮಧ್ಯಾಹ್ನ 12.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಕೆ ಪ್ರಭುದಾಸ್ | ಕಂದಾಯ ವಸೂಲಿಗಾರರು |
| 5 | ಸ್ವಾಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |

-:ನಡಾವಳಿಯ ವರದಿ:-

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**<u>ವಿಷಯ ಸಂಖ್ಯೆ: 1:-</u> ಮಸ್ಟರಿಂಗ್ ಪಾಯಿಂಟ್‌ಗಳನ್ನು ಹೆಚ್ಚಿಸುವ ಬಗ್ಗೆ**

ಶ್ರೀ ಸ್ವಾಮಿ, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ನಂ.70ರ ವ್ಯಾಪ್ತಿಯಲ್ಲಿ 2 ಮಸ್ಟರಿಂಗ್ ಸೆಂಟರ್ ಗಳಿದ್ದು, 3 ಮಸ್ಟರಿಂಗ್ ಸೆಂಟರ್ ಅವಶ್ಯಕತೆ ಇರುವುದರಿಂದ 3 ಮಸ್ಟರಿಂಗ್ ಸೆಂಟರ್‌ಗಳನ್ನು ಮಾಡಲು ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಮುಚ್ಚಿತ ಮಾರ್ಗದಲ್ಲಿ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

- **<u>ವಿಷಯ ಸಂಖ್ಯೆ:2 :-</u> ಅನಧಿಕೃತ ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ ಅನಧಿಕೃತ ಕಟ್ಟಡಗಳನ್ನು ಸರ್ವೇ ಮಾಡಿ ತಿಳುವಳಿಕೆ ಪತ್ರಗಳನ್ನು ನೀಡಲು ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿರವರು ಆದೇಶ ನೀಡಿದ್ದು, ಅದರಂತೆ ಕಂದಾಯ ಅಧಿಕಾರಗಳ ಸಹಕಾರದೊಂದಿಗೆ ವಾರ್ಡ್ 70ರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ

Scanned with CamScanner

ನಿರ್ಮಿಸಿರುವ/ ನಿರ್ಮಿಸುತ್ತಿರು Category-1 & 2 ಕಟ್ಟಡಗಳಿಗೆ 313, ಪಿ.ಓ & ಸಿ.ಓ ನೋಟೀಸ್ ಜಾರಿ ಮಾಡುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ಇದಕ್ಕೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ದಿನನಿತ್ಯದ ಕೆಲಸ ಕಾರ್ಯಗಳ ಒತ್ತಡದ ನಡುವೆಯೂ ಪ್ರತಿನಿತ್ಯವೂ 313, ತಾತ್ಕಾಲಿಕ ಆದೇಶ & ಸ್ಥಿರೀಕರಣ ಆದೇಶಗಳ ನೋಟೀಸ್ ಗಳನ್ನು ಜಾರಿ ಮಾಡಲಾಗುತ್ತಿದೆ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 3:– ಬೀದಿದೀಪಗಳ ಅಸಮರ್ಪಕ ನಿರ್ವಹಣೆ**

ವಾರ್ಡ್ 70ರ ವ್ಯಾಪ್ತಿಯಲ್ಲಿ ಬೀದಿದೀಪಗಳ ನಿರ್ವಹಣೆಯನ್ನು ಪಡೆದಿರುವ ಗುತ್ತಿಗೆದಾರರು ಸಾರ್ವಜನಿಕರಿಗೆ ದೂರವಾಣಿ ಮೂಲಕ ಸ್ಪಂದಿಸುತ್ತಿಲ್ಲವೆಂದು ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ದೂರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಪ್ರತಿಕ್ರಿಯಿಸಿ, ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಕರೆ ಮಾಡಿ ಸಾರ್ವಜನಿಕ ದೂರುಗಳಿಗೆ ಸ್ಪಂದಿಸಲು ದೂರವಾಣಿ ಮೂಲಕ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ

Scanned with CamScanner